**ಶ್ರೀ ಜಗದೀಶ್ ಶೆಟ್ಟರ್** : ಮಾನ್ಯ ಅಧ್ಯಕ್ಷರೆ, ಒಂದು ವಿಷಯ.

**ಅಧ್ಯಕ್ಷರು** : ಈಗ ಸದನವನ್ನು ಸೋಮವಾರ ಬೆಳಿಗ್ಗೆ 11-00 ಘಂಟೆವರೆಗೆ ಮುಂದೂಡುತ್ತಿದ್ದೇನೆ.

**(ಸಭೆಯು 4 ಗಂಟೆ 45 ನಿಮಿಷಕ್ಕೆ ಮುಂದೂಡಲ್ಪಟ್ಟು ಮತ್ತೆ ದಿ : 26.07.04 ರಂದು ಸೋಮವಾರ ಬೆಳಿಗ್ಗೆ 11 ಗಂಟೆಗೆ ಸೇರಲು ನಿಶ್ಚಯಿಸಿತು.)**

## 10. ಅನುಬಂಧ I

### ರಾಜ್ಯದಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಮಸೂದೆಗೆ ತಿದ್ದುಪಡಿಸಿರುವ ಬಗ್ಗೆ

154(69) ಶ್ರೀ ಕೆ.ಎಸ್. ಈಶ್ವರಪ್ಪ(ಶಿವಮೊಗ್ಗ) : ಮಾನ್ಯ ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ. ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ರಾಜ್ಯದಲ್ಲಿ ಸ್ವಯಂಘೋಷಿತ ಆಸ್ತಿತೆರಿಗೆಯನ್ನು ಅವೈಜ್ಞಾನಿಕವಾಗಿ ಜಾರಿಗೆ ತಂದಿರುವುದರಿಂದ ಅದನ್ನು ತಿದ್ದುಪಡಿ ಮಸೂದೆ ಜಾರಿಗೆ ತರುವುದರ ಮೂಲಕ ವೈಜ್ಞಾನಿಕವಾಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; (ವಿವರ ನೀಡುವುದು) ?

**ಶ್ರೀ ಎಸ್.ಆರ್. ಮೋರೆ (ಪೌರಾಡಳಿತ ಹಾಗೂ ಕೆ.ಯು.ಐ.ಡಿ.ಎಫ್.ಸಿ ಸಚಿವರು):** ಅ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿಯನ್ನು ಜಾರಿಗೆ ತಂದ ನಂತರ ಬಹುತೇಕ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ಆದಾಯವು ಹೆಚ್ಚಿದ್ದು, ಈ ಪದ್ಧತಿಯು ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯ ವೈಜ್ಞಾನಿಕ ಹಾಗೂ ಪಾರದರ್ಶಕವಾಗಿರುತ್ತದೆ. ಇದರ ವಿರುದ್ಧ ನೂರಾರು ಅರ್ಜಿಗಳು ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಉಚ್ಚನ್ಯಾಯಾಲಯವು ಸರ್ಕಾರದ ನಿಲುವನ್ನು ಶ್ಲಾಘಿಸಿ, ಸದರಿ ರಿಟ್ ಅರ್ಜಿಗಳನ್ನು ವಜಾಗೊಳಿಸಿದೆ. ಸ್ವಯಂಘೋಷಿತ ಆಸ್ತಿ ತೆರಿಗೆ ಪದ್ಧತಿಗೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದೆ. ಆದರೆ ಶಿವಮೊಗ್ಗ, ಮಂಗಳೂರು ಮತ್ತು ಮಂಡ್ಯ ನಗರಸಭೆಗಳ ವ್ಯಾಪ್ತಿಯಲ್ಲಿ ಕೆಲವು ಸಂಘ ಸಂಸ್ಥೆಗಳು ಮಾತ್ರ ಈ ಪದ್ಧತಿಯ ವಿರುದ್ಧ ದೂರು ಸಲ್ಲಿಸಿ ಕೆಲವು ಬದಲಾವಣೆಗಳನ್ನು ಕೋರಿರುತ್ತಾರೆ.

### ಬಸವ ಕಲ್ಯಾಣ ಕುಡಿಯುವ ನೀರಿನ ಯೋಜನೆ.

156(369) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ.(ಬಸವಕಲ್ಯಾಣ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಸವಕಲ್ಯಾಣ ಪುರಸಭೆಯ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಅಳವಡಿಸಿರುವ ಪೈಪುಗಳು ತುಂಬಾ ಹಳೆಯದಾಗಿರುವುದರಿಂದ ಇಲ್ಲಿನ ಜನತೆಗೆ ಕಲುಷಿತ ನೀರು ಸರಬರಾಜಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಬಸವಕಲ್ಯಾಣ ಪಟ್ಟಣದ ಅಂಬೇಡ್ಕರ್ ವೃತ್ತದಿಂದ ತ್ರಿಪುರಾಂತ ಬಡಾವಣೆವರೆಗಿನ ಪೈಪುಗಳು ಬದಲಾವಣೆಯ ಸಲುವಾಗಿ ಸುಮಾರು 42,40,000/- ರೂ.ಗಳ ಅಂದಾಜು ವೆಚ್ಚವನ್ನು ಸಿದ್ಧಪಡಿಸಿದ್ದು, ಈ ಪ್ರಸ್ತಾವನೆಯು ಈಗ ಸರ್ಕಾರದಿಂದ ಕರ್ನಾಟಕ ನಗರ ನೀರು ಸರಬರಾಜು ಮಂಡಳಿಗೆ ಬಂದಿರುವುದು ನಿಜವಲ್ಲವೇ ;

ಇ) ಹಾಗಿದ್ದಲ್ಲಿ, ಸದರಿ ಕಾಮಗಾರಿಗೆ ಅಗತ್ಯವಿರುವ ಮೇಲ್ಕಂಡ ಮೊತ್ತದ ಹಣವನ್ನು ಬಿಡುಗಡೆ ಮಾಡಲಾಗಿದೆಯೇ ;

---

(† ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)

ಈ) ಇಲ್ಲದಿದ್ದಲ್ಲಿ ಆ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ?

ಶ್ರೀ ಧರ್ಮಸಿಂಗ್ (ಮುಖ್ಯ ಮಂತ್ರಿಗಳು) :

ಅ) ಕುಡಿಯುವ ನೀರಿನ ಸರಬರಾಜಿಗೆ ಅಳವಡಿಸಿರುವ ಕೊಳವೆ ಮಾರ್ಗದಲ್ಲಿ ಸೋರಿಕೆ ಉಂಟಾಗಿದ್ದು ಸರ್ಕಾರದ ಗಮನಕ್ಕೆ ಬಂದಿದ್ದು ಸದರಿ ಕೊಳವೆ ಮಾರ್ಗದಲ್ಲಿ ನೀರು ಸರಬರಾಜು ಮಾಡುವುದನ್ನು ಸ್ಥಗಿತಗೊಳಿಸಿ, ಬಸವಕಲ್ಯಾಣ ಪಟ್ಟಣಕ್ಕೆ ಶುಲ್ಕಿ ನಾಲಾದಿಂದ ಕುಡಿಯುವ ನೀರು ಸರಬರಾಜು ಯೋಜನೆಯಡಿ ಅಳವಡಿಸಲಾದ 300 ಮಿ.ಮೀ. ವ್ಯಾಸದ ಡಿ.ಐ. ಕೊಳವೆ ಮಾರ್ಗಕ್ಕೆ ಸಂಪರ್ಕ ಕಲ್ಪಿಸಿ. ಶುದ್ಧ ನೀರನ್ನು ಸರಬರಾಜು ಮಾಡಲಾಗುತ್ತಿದೆ.

ಆ) ಹೌದು

ಇ) ಪರಿಶೀಲನೆಯಲ್ಲಿದೆ.

ಈ) ಪರಿಶೀಲನೆಯಲ್ಲಿದೆ.

**ಬಸವ ಕಲ್ಯಾಣ ಮತ್ತು ಕ್ಷೇತ್ರದಲ್ಲಿ ಕೈಗಾರಿಕೆ ಪ್ರಾರಂಭಿಸಲು ನೀಡುವ ರಿಯಾಯಿತಿಗಳು**

157(371) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಕೂಬ.(ಬಸವಕಲ್ಯಾಣ) : ಮಾನ್ಯ ಭಾರಿ, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಇರುವ ಭಾರಿ. ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ;

ಆ) ಈ ಕ್ಷೇತ್ರದಲ್ಲಿ ಕೈಗಾರಿಕೆಗಳನ್ವಯ ಪ್ರಾರಂಭಿಸಿರುವ ಉದ್ಯಮಿಗಳಿಗೆ ಎಷ್ಟು ಮೊತ್ತದ ಸಬ್ಸಿಡಿ ಹಣವನ್ನು ಪಾವತಿ ಮಾಡಬೇಕಿದೆ ? ಹಾಗೂ ಯಾವ ಅವಧಿಯಿಂದ ಈ ಬಾಕಿ ಉಳಿದುಕೊಂಡು ಬಂದಿದೆ ; (ಸಬ್ಸಿಡಿ ಹಣವನ್ನು ಪಾವತಿ ಮಾಡಬೇಕಾಗಿರುವ ಸಂಸ್ಥೆಗಳ ಹೆಸರು, ವಿವರ ಹಾಗೂ ಸಬ್ಸಿಡಿ ಹಣದ ಮೊತ್ತದ (ವಿವರಗಳನ್ನು ನೀಡುವುದು) :

ಇ) ಹಲವಾರು ವರ್ಷಗಳಿಂದ ಸಬ್ಸಿಡಿ ಹಣವು ಬಾಕಿ ಉಳಿದಿರುವುದರಿಂದ ಹಣವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

ಈ) ಬಸವಕಲ್ಯಾಣದಲ್ಲಿ ಭಾರಿ, ಮಧ್ಯಮ ಮತ್ತು ಸಣ್ಣ ಕೈಗಾರಿಕೆಗಳನ್ನು ಉತ್ತೇಜಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

ಉ) ಇಲ್ಲಿ ಕೈಗಾರಿಕೆಗಳನ್ನು ಪ್ರಾರಂಭಿಸುವ ಉದ್ಯಮಿಗಳಿಗೆ ಯಾವ ಉತ್ತೇಜನ ಮತ್ತು ರಿಯಾಯಿತಿಗಳನ್ನು ನೀಡಲಾಗುವುದು ?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಮಾನ್ಯ ಭಾರಿ, ಮಧ್ಯಮ ಹಾಗೂ ಸಣ್ಣ ಕೈಗಾರಿಕೆಗಳು ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು) :

ಅ) ಬಸವಕಲ್ಯಾಣ ತಾಲ್ಲೂಕಿನಲ್ಲಿ ದಿನಾಂಕ : 30-3-04 ರ ಅಂತ್ಯಕ್ಕೆ ಒಟ್ಟು 947 ಸಣ್ಣ ಕೈಗಾರಿಕೆಗಳು ಒಟ್ಟು ರೂ. 754.54 ಲಕ್ಷ ಬಂಡವಾಳ ಹೂಡಿ, 4862 ಉದ್ಯೋಗಾವಕಾಶಗಳನ್ನು ಕಲ್ಪಿಸಿ ಸ್ಥಾಪನೆಯಾಗಿವೆ. ಹಾಗೂ ಒಂದು ಮಧ್ಯಮ ಕೈಗಾರಿಕಾ ಘಟಕವು ಸ್ಥಾಪಿತವಾಗಿದೆ. ರೂ. 275 ಲಕ್ಷಗಳೊಂದಿಗೆ 120 ಜನರಿಗೆ ಉದ್ಯೋಗ ನೀಡಿದೆ.

ಆ) ಬಸವಕಲ್ಯಾಣ ತಾಲ್ಲೂಕಿನಲ್ಲಿ ದಿನಾಂಕ : 1-1-1999 ರಿಂದ 30-6-2004 ರವರೆಗೆ ಒಟ್ಟು 137 ಘಟಕಗಳಿಗೆ ರೂ. 59,46,065 ಸಹಾಯಧನ ಬಿಡುಗಡೆ ಮಾಡುವುದು ಬಾಕಿ ಇರುತ್ತದೆ.

(† ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)